# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ: ತುವಿ: ಡಿಇವಿ-02:2024-25/2763 ದಿನಾಂಕ:23.12.2024

:ಸುತ್ತೋಲೆ:

ವಿಷಯ: ರಾಷ್ಟ್ರಪಿತ ಮಹಾತ್ಮಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ನಡೆದ ಸ್ವಾತಂತ್ರ್ಯ ಗ್ರಾಮದ ಐತಿಹಾಸಿಕ ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಅಂಗವಾಗಿ ಕಾರ್ಯಕ್ರಮಗಳನ್ನು ಆಯೋಜಿಸುವ ಕುರಿತು.

ಉಲ್ಲೇಖ:1. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಆದೇಶ ಸಂಖ್ಯೆ:ಕೆಸಿಇ/ಪಿಐಪಿ/2024 ಬೆಂಗಳೂರು ದಿನಾಂಕ:01.10.2024

2. ಸರ್ಕಾರದ ಅಧೀನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯ-2) ಇವರ ಪತ್ರ ಸಂಖ್ಯೆ:ಇ-ಕ್ರಮಾಂಕ:ಇಡಿ 587 ಯುಆರ್‌ಸಿ 2024 ದಿನಾಂಕ:16.12.2024

3. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:23.12.2024

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(01)ರ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಹೊರಡಿಸಿರುವ ಆದೇಶದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಆದರ್ಶ, ಸ್ವಾತಂತ್ರ ಸಂಗ್ರಾಮದಲ್ಲಿ ಭಾಗಿಯಾಗಿ ತ್ಯಾಗ-ಬಲಿದಾನಗಳನ್ನು ನೀಡಿದ ನಾಯಕರ ಬಗ್ಗೆ ಇಂದಿನ ಯುವ ಪೀಳಿಗೆಗೆ ಪರಿಚಯಿಸುವ ಮತ್ತು ಗಾಂಧೀಜಿಯವರ ಮೌಲ್ಯಗಳು, ಆದರ್ಶಗಳ ಸಾರ್ವಕಾಲಿಕ ಪ್ರಸ್ತುತತೆಯನ್ನು ಇಂದಿನ ಪೀಳಿಗೆಗೆ ತಿಳಿಸಲು ಕೈಗೊಳ್ಳಬಹುದಾದ ಕ್ರಮಗಳ ಬಗ್ಗೆ ವಿವರವಾಗಿ ನಮೂದಿಸಲಾಗಿರುತ್ತದೆ ಎಂದು ತಿಳಿಸಿರುತ್ತಾರೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಹೊರಡಿಸಲಾಗಿರುವ ಆದೇಶದಲ್ಲಿನ ಸೂಚನೆಗಳಂತೆ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಎಲ್ಲಾ ವಿಶ್ವವಿದ್ಯಾನಿಲಯಗಳಲ್ಲಿ ಮತ್ತು ಕಾಲೇಜುಗಳ ಮಟ್ಟದಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನ ನೀಡುವಂತೆ ಉಲ್ಲೇಖ(02)ರ ಸರ್ಕಾರದ ಅಧೀನ ಕಾರ್ಯದರ್ಶಿಗಳ ಪತ್ರದಲ್ಲಿ ತಿಳಿಸಿರುತ್ತಾರೆ.

ಈ ಸಂಬಂಧ ಮೇಲ್ಕಂಡ ಉಲ್ಲೇಖಿತ ಪತ್ರಗಳನ್ನು ಮತ್ತು ಲಗತ್ತನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಿದ್ದು, ರಾಷ್ಟ್ರಪಿತ ಮಹಾತ್ಮಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ನಡೆದ ಸ್ವಾತಂತ್ರ್ಯ ಗ್ರಾಮದ ಐತಿಹಾಸಿಕ ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಅಂಗವಾಗಿ ಸುತ್ತೋಲೆಯೊಂದಿಗೆ ಲಗತ್ತಿಸಿರುವ ಅಡಕದ ವಿವರ/ಸೂಚನೆಗಳಂತೆ, ತಮ್ಮ ವಿಭಾಗ ಮತ್ತು ಕಾಲೇಜುಗಳಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಿ ವರದಿಗಳನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವಂತೆ, ಈ ಮೂಲಕ ತಿಳಿಸಲಾಗಿದೆ.

ಆದೇಶದ ಮೇರೆಗೆ

ಉಪಕುಲಸಚಿವರು
ಅಭಿವೃದ್ಧಿ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

1. ಎಲ್ಲಾ ಅಧ್ಯಕ್ಷರು/ಸಂಯೋಜಕರುಗಳಿಗೆ, ಸ್ನಾತಕೊತ್ತರ ಅಧ್ಯಯನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು-ಈ ಸುತ್ತೋಲೆಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
2. ಮಾನ್ಯ ಕುಲಪತಿಗಳ ಆಪ್ತಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಕಚೇರಿ ಪ್ರತಿ.

**ಕರ್ನಾಟಕ ಸರ್ಕಾರ**

ಇ-ಕ್ರಮಾಂಕ: ಇಡಿ 587 ಯುಆರ್‌ಸಿ 2024

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:16.12.2024

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ
ಬೆಂಗಳೂರು - 560001.

ಇವರಿಗೆ:

1) ಕುಲಸಚಿವರುಗಳು,
ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಖಾಸಗಿ ವಿಶ್ವವಿದ್ಯಾಲಯಗಳು.
2) ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.

---

ಮಾನ್ಯರೆ,

ವಿಷಯ:- ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ನಡೆದ ಸ್ವಾತಂತ್ರ್ಯ ಗ್ರಾಮದ ಐತಿಹಾಸಿಕ ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ವನ್ನು ಆಯೋಜಿಸುವ ಬಗ್ಗೆ.

ಉಲ್ಲೇಖ:- ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಆದೇಶ ಸಂಖ್ಯೆ: ಕಸಿಇ/ಪಿಐಪಿ/2024 ಬೆಂಗಳೂರು. ದಿನಾಂಕ: 01.10.2024

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಹೊರಡಿಸಿರುವ ಆದೇಶದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಸದರಿ ಆದೇಶದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಆದರ್ಶ, ಸ್ವಾತಂತ್ರ ಸಂಗ್ರಾಮದಲ್ಲಿ ಭಾಗಿಯಾಗಿ ತ್ಯಾಗ-ಬಲಿದಾನಗಳನ್ನು ನೀಡಿದ ನಾಯಕರ ಬಗ್ಗೆ ಇಂದಿನ ಯುವ ಪೀಳಿಗೆಗೆ ಪರಿಚಯಿಸುವ ಮತ್ತು ಗಾಂಧೀಜಿಯವರ ಮೌಲ್ಯಗಳು, ಆದರ್ಶಗಳ ಸಾರ್ವಕಾಲಿಕ ಪ್ರಸ್ತುತತೆಯನ್ನು ಇಂದಿನ ಪೀಳಿಗೆಗೆ ತಿಳಿಸುವಂತೆ ಕೈಗೊಳ್ಳಬಹುದಾದ ಕ್ರಮಗಳ ಬಗ್ಗೆ ವಿವರವಾಗಿ ನಮೂದಿಸಲಾಗಿರುತ್ತದೆ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಹೊರಡಿಸಲಾಗಿರುವ ಆದೇಶದಲ್ಲಿನ ಸೂಚನೆಗಳಂತೆ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಮತ್ತು ಕಾಲೇಜುಗಳ ಮಟ್ಟದಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನ ನೀಡುವಂತೆ ಕೋರಲು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ,

(ಕೆ ಮಂಜುನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ-2)

**ಪ್ರತಿ ಮಾಹಿತಿಗಾಗಿ:**

1. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
4. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು.
5. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು.